## ವಾರ್ಡ್ ಸಭೆ ಸಂಖ್ಯೆ.16

ದಿನಾಂಕ: 21.08.2021 ರಂದು ಸಮಯ 3:00 ಗಂಟೆಗೆ ವಾರ್ಡ್.ಸಂಖ್ಯೆ.44 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಮಾನ್ಯ ವಾರ್ಡ್ ಅಭಿಯಂತರರು (ಕಾರ್ಯದರ್ಶಿಗಳು) ಅಧ್ಯಕ್ಷತೆಯಲ್ಲಿ ಕರೆಯಲಾಯಿತು.

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು**

1. ಶ್ರೀಮತಿ ಕೆ ಸ್ವಯಂಪ್ರಭಾ, ಅದೀಕ್ಷಕ ಅಭಿಯಂತರರು (ಪಶ್ಚಿಮ) ವಲಯ (ಅಧ್ಯಕ್ಷರು)
2. ಶ್ರೀ. ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ, (ಕಾರ್ಯದರ್ಶಿ)
3. ಶ್ರೀ ಜಯಪಾಲ್ ಸದಸ್ಯರು.
4. ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು.
5. ಶ್ರೀ ನಂಜೇಗೌಡ ಬಿ.ವಿ ಸದಸ್ಯರು.
6. ಶ್ರೀ ರಾಜೇಶ್ ಸದಸ್ಯರು.
7. ಶ್ರೀ ಬಿ.ಆರ್ ಮುಟ್ಟಸ್ವಾಮಿ ಸದಸ್ಯರು.
8. ಶ್ರೀ ಗೋಪಿ ಸದಸ್ಯರು.
9. ಶ್ರೀ ವೆಂಕಟೇಶ್ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ.
10. ಶ್ರೀ ವಿಠಲ್ ಮೀಟರ್ ರೀಡರ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ) ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ.
11. ಶ್ರೀ ದಿನೇಶ್ ಕುಮಾರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
12. ಶ್ರೀ ನಿಂಗರಾಜು ಎನ್ ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44 ಮಾರಪ್ಪನಪಾಳ್ಯ.
13. ಶ್ರೀ ಶಿವರಾಂ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ.
14. ಶ್ರೀ ಎಂ ದೀಪಕ್ ಗಣಕಯಂತ್ರ ನಿರ್ವಾಹಕರು, ಶಂಕರನಗರ ಪ್ರಾಥಮಿಕ ಆರೋಗ್ಯ ಕೇಂದ್ರ

ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಲಾಯಿತು.

| ಕ್ರ.ಸಂ | ವಿವರಣೆ | ಕ್ರಮ |
|---|---|---|
| 1 | ಕಾರ್ಯದರ್ಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | – |
| 2 | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರ | – |
| 3 | ಸಭೆಯಲ್ಲಿ ಹಾಜರಿದ್ದ ಸದಸ್ಯರು ಹಾಗೂ ಸಾರ್ವಜನಿಕರು ಕೋವಿಡ್ ಬಗ್ಗೆ ಮಾಹಿತಿ ಕೋರಿದರು, ಇದಕ್ಕೆ ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾಹಿತಿ ತಿಳಿಸಿದರು. | – |
| 4 | ಸದಸ್ಯರು ರವರು ವಾರ್ಡ್ ವ್ಯಾಪ್ತಿಯಲ್ಲಿ ಸಿಸಿ ಕ್ಯಾಮರಗಳಿಗೆ ಕಲ್ಪಿಸಿರುವ ವಿದ್ಯುತ್ ಸಂಪರ್ಕವನ್ನು ಬೆಸ್ಕಾಂ ಅಧಿಕಾರಿಗಳು ಕಡಿತಗೊಳಿಸಿರುವುದರಿಂದ ಕ್ಯಾಮರಗಳು ಕಾರ್ಯನಿರ್ವಹಿಸುತ್ತಿಲ್ಲ ಎಂದು ತಿಳಿಸಿದರು. ಆದರೆ ಬೆಸ್ಕಾಂ ಅಧಿಕಾರಿಗಳು ಸಿ.ಸಿ ಕ್ಯಾಮರಗಳಿಗೆ ವಿದುತ್ಯ ಸಂಪರ್ಕವನ್ನು ಕಡಿತಗೊಳಿಸಲಾಗಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಮಸ್ಯೆಯನ್ನು ಪತ್ತೆ ಹಚ್ಚಿ ಪರಿಹರಿಸಲಾಗುವುದು ಎಂದು ತಿಳಿಸಿದರು. | ವಾರ್ಡ್ ಅಭಿಯಂತರರು ವಾರ್ಡ್ ಸಂಖ್ಯೆ.44 ಮಾರಪ್ಪನಪಾಳ್ಯ |
| 5 | ಸಾರ್ವಜನಿಕರು ವಾರ್ಡ್ ವ್ಯಾಪ್ತಿಯ ಹಲವು ಸ್ಥಳಗಳಲ್ಲಿ ಐಮ್ಯಾಕ್ಸ್ ಬೀದಿ ದೀಪಗಳು ಹಾಗೂ ಟೆಂಪಲ್ ಬೆಲ್ ಅಪಾರ್ಟ್‌ಮೆಂಟ್ ಹತ್ತಿರದಿಂದ ಸಾಬೂನು ಕಾರ್ಖಾನೆ ಮುಂಭಾಗದವರೆಗೆ ಬೀದಿ ದೀಪಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲ ತಿಳಿಸಿದರು. ಇದಕ್ಕೆ ಮಾನ್ಯ ಅಧ್ಯಕ್ಷರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಸಭೆಗೆ ತಿಳಿಸಿದರು. | ಸಹಾಯಕ ಅಭಿಯಂತರರು ಬೀದಿ ದೀಪ |
| 6 | ಸಾರ್ವಜನಿಕರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕೆಲವು ತಿಂಗಳುಗಳಿಂದ ನೀರಿನ ಸರಬರಾಜು ಆಗುತ್ತಿಲ್ಲ ಎಂದು ತಿಳಿಸಿದರು. ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿ ರವರು ಸಮಸ್ಯೆಯನ್ನು ಪರಿಹರಿಸುತ್ತೇವೆ ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 7 | ಕಾರ್ಯದರ್ಶಿಗಳು ಲಾರಿ ಸ್ಟಾಂಡ್ ಸಿಗ್ನಲ್ ಹತ್ತಿರ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ರಸ್ತೆ ಅಗೆತವನ್ನು ಮಾಡಿರುತ್ತೀರಿ ಆದ್ದರಿಂದ ಸದರಿ ರಸ್ತೆ ಅಗೆತದ ತ್ಯಾಜ್ಯವನ್ನು ತೆರವುಗೊಳಿಸಲು ಸೂಚಿಸಿದರು. ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿ ರವರು ತೆರವುಗೊಳಿಸುತ್ತೇವೆ ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |

Scanned with CamScanner

| | | |
|---|---|---|
| 8 | ಕಾರ್ಯದರ್ಶಿಗಳು ಡಾಲರ್ಸ್ ಸ್ಕೀಮ್ ಕಾಲೋನಿ ಹಾಗೂ ರಾಜೀವ್‌ಗಾಂಧಿ ಲೇಔಟ್‌ನಲ್ಲಿ ರಸ್ತೆ ಡಾಂಬರೀಕರಣ ಮಾಡಬೇಕಾಗಿದೆ ಆದ್ದರಿಂದ ಸದರಿ ರಸ್ತೆಗಳಲ್ಲಿನ ಒಳಚರಂಡಿ ಮ್ಯಾನ್ ಹೋಲ್‌ಗಳನ್ನು ಎತ್ತರಿಸಲು ತಿಳಿಸಿದರು. ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿ ರವರು ಕಾಮಗಾರಿಯನ್ನು ನಿರ್ವಹಿಸುತ್ತೇವೆ ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 9 | ಸದಸ್ಯರು ರಕ್ಷ ಆಸ್ಪತ್ರೆ ಹತ್ತಿರ ಕಾವೇರಿ ನೀರಿನ ಸೋರಿಕೆಯನ್ನು ಸರಿಪಡಿಸಿರುತ್ತಾರೆ. ಆದರೆ ಮತ್ತೆ ಕಾವೇರಿ ನೀರು ಸೋರಿಕೆಯಾಗುತ್ತಿರುತ್ತದೆ ಆದ್ದರಿಂದ ಸದರಿ ಸಮಸ್ಯೆಯನ್ನು ಸರಿಪಡಿಸಲು ಸೂಚಿಸಿದರು. ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿ ರವರು ಕಾಮಗಾರಿಯನ್ನು ನಿರ್ವಹಿಸುತ್ತೇವೆ ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 10 | ಕಾರ್ಯದರ್ಶಿಗಳು ಡಾಲರ್ಸ್ ಸ್ಕೀಮ್ ಕಾಲೋನಿಯಲ್ಲಿ ಟ್ರಾನ್ಸ್‌ಫಾರಮರ್ ಹತ್ತಿರ ಅನವಶ್ಯಕವಾಗಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಸೂಚಿಸಿದರು. ಇದಕ್ಕೆ ಬೆಸ್ಕಾಂ ಅಧಿಕಾರಿಗಳು ತೆರವುಗೊಳಿಸುತ್ತೇವೆ ಎಂದು ತಿಳಿಸಿದರು. | ಬೆಸ್ಕಾಂ ಅಧಿಕಾರಿಗಳು |

**ಅಧ್ಯಕ್ಷರು**

ವಾರ್ಡ್ ಕಮಿಟಿ, ವಾರ್ಡ್ ಸಂಖ್ಯೆ.44

ಮಾರಪ್ಪನಪಾಳ್ಯ

Scanned with CamScanner